ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ರಾಜ್ಯದಲ್ಲಿನ ಶುದ್ಧ ಕುಡಿಯುವ ನೀರಿನ ಘಟಕಗಳ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

19 (50) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಜನರಿಗೆ ಶುದ್ಧ ಕುಡಿಯುವ ನೀರಿನ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲಾಗಿದ್ದು, ರಾಜ್ಯಾದ್ಯಂತ ಎಷ್ಟು ಘಟಕಗಳನ್ನು ಸ್ಥಾಪಿಸಲಾಗಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಸ್ಥಾಪಿಸಲಾದ ಶುದ್ಧ ಕುಡಿಯುವ ನೀರಿನ ಘಟಕಗಳೆಲ್ಲವೂ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿವೆಯೇ;

(ಇ) ಸದರಿ ನೀರಿನ ಘಟಕಗಳ ನಿರ್ವಹಣೆಯ ಹೊಣೆಯನ್ನು ಯಾರಿಗೆ ವಹಿಸಲಾಗಿದೆ;

(ಈ) ದುರಸ್ಥಿಗೆ ಬಂದ ಯಂತ್ರಗಳನ್ನು ಕ್ಲುಪ್ತ ಸಮಯದೊಳಗೆ ದುರಸ್ಥಿ ಮಾಡದಿರುವ ಬಗ್ಗೆ ಹಲವಾರು ದೂರುಗಳಿದ್ದು, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು?